ಸಂಯುಕ್ತ ಕರ್ನಾಟಕ

**Wednesday 04th January 2018**

# Medal Winners Colleges: RVCE Secured Second Place

## 9 ರಂದು ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಘಟಿಕೋತ್ಸವ

**ಬೆಳಗಾವಿ:** ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 17ನೇ ಘಟಿಕೋತ್ಸವ ಜ.9 ರಂದು ಬೆಳಿಗ್ಗೆ 11 ಗಂಟೆಗೆ ವಿಟಿಯು ಜ್ಞಾನ ಸಂಗಮ ಆವರಣದ ಸಭಾಂಗಣದಲ್ಲಿ ಜರುಗಲಿದೆ ಎಂದು ಕುಲಪತಿ ಡಾ. ಕರಿಸಿದ್ದಪ್ಪ ತಿಳಿಸಿದರು.

ಬುಧವಾರ ನಗರದ ವಿಟಿಯು ಸಭಾಂಗಣದಲ್ಲಿ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ವಜುಭಾಯಿ ಆರ್. ವಾಲಾ ಅಧ್ಯಕ್ಷತೆ ವಹಿಸಿ ಘಟಿಕೋತ್ಸವ ಉದ್ಘಾಟಿಸಲಿದ್ದಾರೆ. ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಸಚಿವ ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಬಸವರಾಜ ರಾಯರೆಡ್ಡಿ ಉಪಸ್ಥಿತರಿರುವರು. ನವದೆಹಲಿಯ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಅಧ್ಯಕ್ಷರಾದ ಪ್ರೊ. ಅನಿಲ್ ಡಿ. ಸಹಸ್ರಬುದ್ಧೆ ಮುಖ್ಯ ಅತಿಥಿಗಳಾಗಿ ಆಗಮಿಸುತ್ತಿದ್ದು, ಘಟಿಕೋತ್ಸವ ಭಾಷಣ ಮಾಡುವರು ಎಂದು ವಿವರಿಸಿದರು.

### ಇಬ್ಬರಿಗೆ ಗೌರವ ಡಾಕ್ಟರೇಟ್

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ವತಿಯಿಂದ ಭಾರತ ಸರ್ಕಾರದ ಬಾಹ್ಯಾಕಾಶ ಇಲಾಖೆ ಕಾರ್ಯದರ್ಶಿಗಳು ಹಾಗೂ ಬೆಂಗಳೂರಿನ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷರು ಮತ್ತು ಪದ್ಮಶ್ರೀ ಪುರಸ್ಕೃತ ಎ.ಎಸ್. ಕಿರಣ್‌ಕುಮಾರ್ ಮತ್ತು ಮುಂಬೈನ ಮಹೀಂದ್ರಾ ಸಮೂಹದ ಅಧ್ಯಕ್ಷ ಆನಂದ ಮಹೀಂದ್ರಾ ಅವರಿಗೆ ಈ ಬಾರಿಯ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆ ಎಂದು ತಿಳಿಸಿದರು.

### ಪದಕ ವಿಜೇತರು

ಚಿಕ್ಕಮಗಳೂರಿನ ಆದಿಚುಂಚನಗಿರಿ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿಯ ವಿದ್ಯಾರ್ಥಿ ಸಚಿನ ಕೀರ್ತಿ ಎನ್. ಅವರು 13 ಪದಕಗಳನ್ನು ಪಡೆದು ವಿಶ್ವವಿದ್ಯಾಲಯಕ್ಕೆ ಪ್ರಥಮ ಸ್ಥಾನವನ್ನು ಗಳಿಸಿದ್ದಾರೆ. ಬೆಂಗಳೂರಿನ ಬಿ.ಎನ್.ಎಮ್. ಇಂಜಿನಿಯರಿಂಗ್ ಕಾಲೇಜಿನ ಪ್ರತ್ಯೂಷಾ ಎ., ಬೆಂಗಳೂರಿನ ಶಿರಡಿ ಸಾಯಿ ಇಂಜಿನಿಯರಿಂಗ್ ಕಾಲೇಜಿನ ಬಿಂದು ಎಸ್, ಬೆಳಗಾವಿಯ ಕೆ.ಎಲ್.ಇ. ಶೇಷಗಿರಿ ಇಂಜಿನಿಯರಿಂಗ್ ಕಾಲೇಜಿನ ರಜತ್ ಹೊಗಾರ್ತಿ ಹಾಗೂ ಸುಳ್ಯದ ಕುರಂಜಿ ವೆಂಕಟರಮಣ ಕಾಲೇಜಿನ ಅರ್ಪಿತಾ ಕೆ.ಎಸ್. ಅವರು ತಲಾ 5 ಪದಕಗಳನ್ನು ಪಡೆದು ದ್ವಿತೀಯ ಸ್ಥಾನ ಗಳಿಸಿದ್ದಾರೆ. ಅದೇ ರೀತಿ ಬೆಂಗಳೂರಿನ ಆರ್‌ಎನ್‌ಎಸ್ ಇನ್ಸ್‌ಟಿಟ್ಯೂಟ್‌ನ ಅಪೂರ್ವ ಶರ್ಮಾ ನಾಲ್ಕು ಪದಕಗಳನ್ನು ಗಳಿಸಿ ತೃತೀಯ ಸ್ಥಾನವನ್ನು ಪಡೆದಿದ್ದಾರೆ.

### ಪದಕ ವಿಜೇತ ಕಾಲೇಜುಗಳು

ಬೆಂಗಳೂರಿನ ಡಿಎಸ್‌ಸಿಇ ಕಾಲೇಜು ಒಟ್ಟು 54 ಅಂಕಗಳನ್ನು ಪಡೆದು ವಿಶ್ವವಿದ್ಯಾಲಯಕ್ಕೆ ಪ್ರಥಮ ಸ್ಥಾನ, ಬೆಂಗಳೂರಿನ ಆರ್‌ವಿಸಿಇ ಕಾಲೇಜು ಒಟ್ಟು 32 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಹಾಗೂ ಬೆಂಗಳೂರಿನ ಬಿಐಟಿ ಕಾಲೇಜು ಒಟ್ಟು 26 ಅಂಕಗಳನ್ನು ಪಡೆದು ತೃತೀಯ ಸ್ಥಾನವನ್ನು ಗಳಿಸಿದೆ.